ಚಾಮುಂಡೇಶ್ವರಿ ವಿದ್ಯುತ್ ಸರಬರಾಜು
ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಸ್ವಾಮ್ಯಕ್ಕೆ ಒಳಪಟ್ಟಿದೆ)
ನಿಗಮ ಕಾರ್ಯಾಲಯ,
ಚಾವಿಸನಿನಿ, ಮೈಸೂರು-570017
Telephone No: 0821-234338

CHAMUNDESHWARI ELECTRICITY SUPPLY CORPORATION LIMITED
*(A Government of Karnataka Undertaking)*
Corporate Office,
CESC, Mysuru-570017
**Web Site:** www.cescmysore.org.
E-mail ID:gmhrd@cescmysore.org

Company Identity Number[CIN]:- U40109KA2004SGC035177

ಕ್ರಮಾಂಕ : ಪ್ರವ್ಯ(ಆ ಮತ್ತು ಮಾ.ಸಂ)/ಉಪ್ರವ್ಯ/ಸಪ್ರವ್ಯ/ವ್ಯ/2021-22/ CYS-423 ದಿನಾಂಕ: 11 JUN 2021

## ಸುತ್ತೋಲೆ

ವಿಷಯ: ಸಿಬ್ಬಂದಿಯು ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವ ಬಗ್ಗೆ.
ಉಲ್ಲೇಖ: ನಿರ್ದೇಶಕರು(ಆ ಮತ್ತು ಮಾಸಂ), ಕವಿಪ್ರನಿನಿ, ಬೆಂಗಳೂರುರವರ ಪತ್ರ ಸಂಖ್ಯೆ: ಕವಿಪ್ರನಿನಿ/ಬಿ5/9655/2020-21 ದಿನಾಂಕ: 07.05.2021.

*****

ರಾಜ್ಯದ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಕರ್ತವ್ಯದ ಅವಧಿಯಲ್ಲಿ ಸಿಬ್ಬಂದಿಯು ಕಡ್ಡಾಯವಾಗಿ ಇಲಾಖೆಯಿಂದ ಪಡೆದ ಗುರುತಿನ ಚೀಟಿಯನ್ನು ಧರಿಸುವ ಮತ್ತು ಸಿಬ್ಬಂದಿಯು ಕರ್ತವ್ಯ ನಿರ್ವಹಿಸುವ ಮೇಜಿನ ಮೇಲೆ ಅಧಿಕಾರಿ/ಸಿಬ್ಬಂದಿಯ ಹೆಸರು ಮತ್ತು ಹುದ್ದೆ ಸೂಚಿಸುವ ನಾಮಫಲಕವನ್ನು ಕಡ್ಡಾಯವಾಗಿ ಅಳವಡಿಸಿ ಸಾರ್ವಜನಿಕ ಸೇವೆಯಲ್ಲಿ ಪಾರದರ್ಶಕತೆಯನ್ನು ತರಲು ಕ್ರಮವನ್ನು ಕೈಗೊಳ್ಳಲು ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 87 ಕತವ 2020 ದಿನಾಂಕ: 03.11.2020 ರಲ್ಲಿ ಸೂಚಿಸಲಾಗಿರುತ್ತದೆ.

ಈ ಹಿನ್ನಲೆಯಲ್ಲಿ ನಿಗಮ/ವಲಯ/ವೃತ್ತ/ವಿಭಾಗ/ಉಪವಿಭಾಗ/ಶಾಖಾ ಕಛೇರಿಗಳ ಹಲವು ಅಧಿಕಾರಿ/ನೌಕರರು ಗುರುತಿನ ಚೀಟಿಯನ್ನು ಧರಿಸದೇ ಕಾರ್ಯನಿರ್ವಹಿಸುತ್ತಿರುವುದು ನಿಗಮದ ಗಮನಕ್ಕೆ ಬಂದಿದ್ದು, ನಾಮಫಲಕ ಮೇಜಿನ ಮೇಲೆ ಇಲ್ಲದೇ ಇರುವುದರಿಂದ ಸಾರ್ವಜನಿಕರಿಗೆ ನಿರ್ದಿಷ್ಟ ಅಧಿಕಾರಿ/ಸಿಬ್ಬಂದಿಯನ್ನು ಗುರುತಿಸಲು ಕಷ್ಟವಾಗಿರುತ್ತದೆ. ಆದ್ದರಿಂದ, ಎಲ್ಲಾ ಅಧಿಕಾರಿಗಳು/ನೌಕರರು ಕರ್ತವ್ಯದ ಅವಧಿಯಲ್ಲಿ ಕಡ್ಡಾಯವಾಗಿ ಗುರುತಿನ ಚೀಟಿಯನ್ನು ಧರಿಸುವಂತೆ ಸೂಚಿಸಲಾಗಿದೆ.

ಸರ್ಕಾರದ ದಿನಾಂಕ: 03.11.2020 ರ ಆದೇಶದಲ್ಲಿನ ಸೂಚನೆಗಳಂತೆ, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಎಲ್ಲಾ ಕಛೇರಿಗಳ ಮುಖ್ಯಸ್ಥರುಗಳು ಅಗತ್ಯ ಕ್ರಮಗಳನ್ನು ಜರುಗಿಸಲು ಮತ್ತು ಅಧೀನ ಸಿಬ್ಬಂದಿಗಳಿಗೆ ಆದೇಶವನ್ನು ತಪ್ಪದೇ ಪಾಲಿಸುವಂತೆ ಸೂಚಿಸುವುದು.

ಮಾನ್ಯ ವ್ಯವಸ್ಥಾಪಕ ನಿರ್ದೇಶಕರವರಿಂದ
ಅನುಮೋದಿಸಲ್ಪಟ್ಟಿರುತ್ತದೆ.

ಪ್ರಧಾನ ವ್ಯವಸ್ಥಾಪಕರು (ಆ ಮತ್ತು ಮಾ.ಸಂ)
ಚಾವಿಸನಿನಿ., ಮೈಸೂರು.

**ಪ್ರತಿಗಳು:**

1. ಮುಖ್ಯ ಇಂಜಿನಿಯರ್(ವಿ), ಮೈಸೂರು ವಲಯ, ಚಾವಿಸನಿನಿ, ಮೈಸೂರು/ಹಾಸನ ಇವರ ಅವಗಾಹನೆಗಾಗಿ.
2. ಮುಖ್ಯ ಪ್ರಧಾನ ವ್ಯವಸ್ಥಾಪಕರು(ಆಂ.ಪ). ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ.
3. ಅಧೀಕ್ಷಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ, ಮೈಸೂರು/ ಚಾಮರಾಜನಗರ-ಕೊಡಗು/ ಹಾಸನ/ಮಂಡ್ಯ ಇವರ ಮಾಹಿತಿಗಾಗಿ.
4. ಉಪ ಲೆಕ್ಕ ನಿಯಂತ್ರಣಾಧಿಕಾರಿಗಳು, ಕಾರ್ಯ ಮತ್ತು ಪಾಲನೆ ವೃತ್ತ, ಚಾವಿಸನಿನಿ, ಮೈಸೂರು/ ಚಾಮರಾಜನಗರ-ಕೊಡಗು/ ಹಾಸನ/ಮಂಡ್ಯ ರವರ ಮಾಹಿತಿಗಾಗಿ.
5. ಕಂಪನಿ ಕಾರ್ಯದರ್ಶಿ, ನಿಗಮ ಕಛೇರಿ, ಚಾವಿಸನಿನಿ, ಮೈಸೂರು ಇವರ ಮಾಹಿತಿಗಾಗಿ
6. ಎಲ್ಲಾ ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ
7. ಎಲ್ಲಾ ಲೆಕ್ಕಾಧಿಕಾರಿ/ಲೆಕ್ಕಾಧಿಕಾರಿ(ಆಂ.ಪ), ಕಾರ್ಯ ಮತ್ತು ಪಾಲನೆ ವಿಭಾಗ, ಚಾವಿಸನಿನಿ ರವರ ಮಾಹಿತಿಗಾಗಿ
8. ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿರವರುಗಳ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತ, ಸುತ್ತೋಲೆಯ ಮಾಹಿತಿಯನ್ನು ಮಾನ್ಯ ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ತಾಂತ್ರಿಕ)/ಮುಖ್ಯ ಆರ್ಥಿಕ ಅಧಿಕಾರಿಯವರ ಗಮನಕ್ಕೆ ತರುವಂತೆ ಕೋರಿದೆ.
9. ಕಾರ್ಯನಿರ್ವಾಹಕ ಇಂಜಿನಿಯರ್(ವಿ), ಎಂ.ಐ.ಎಸ್. ಶಾಖೆ, ನಿಗಮ ಕಛೇರಿ, ನಿಗಮದ ವೆಬ್‌ಸೆಟ್ ನಲ್ಲಿ ಪ್ರಕಟಿಸಲು.
10. ವ್ಯ-1/ಪ್ರ.ಕ.